ಆ) ಅಂತರ್ಜಲ ಅಭಿವೃದ್ಧಿಪಡಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಅಂತರ್ಜಲ ಅತಿಬಳಕೆ/ಕ್ಷಿಷ್ಟಕರ ಪ್ರದೇಶಗಳಲ್ಲಿ ಜನಜಾಗೃತಿ ಶಿಬಿರಗಳನ್ನು ಆಯೋಜಿಸಿ ಅಂತರ್ಜಲ ಅತಿಬಳಕೆಯ ಪರಿಣಾಮಗಳು, ಮಳೆನೀರಿನ ಸಂಗ್ರಹಣೆ ಮತ್ತು ಮರುಬಳಕೆ ಹಾಗೂ ಅಂತರ್ಜಲದ ಸದ್ಬಳಕೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

2. ಸಣ್ಣ ನೀರಾವರಿ, ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ವತಿಯಿಂದ ಮಳೆನೀರನ್ನು ಸಂಗ್ರಹಿಸಿ ಭೂಮಿಗೆ ಇಂಗಿಸಿ ಅಂತರ್ಜಲ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಅಂತರ್ಜಲ ಕೃತಕ ಮರುಪೂರೈಕೆ ರಚನೆಗಳನ್ನು ನಿರ್ಮಿಸಲಾಗುತ್ತಿದೆ.

3. ಅನಿರ್ಬಂಧಿತ ಅಂತರ್ಜಲ ಅತಿಬಳಕೆಯನ್ನು ನಿಯಂತ್ರಿಸಿ ಅಂತರ್ಜಲ ಅಭಿವೃದ್ಧಿಪಡಿಸಲು ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕ 2010ನ್ನು ವಿಧಾನಮಂಡಲದ ಅನುಮೋದನೆ ಪಡೆದ ನಂತರ ನೂತನವಾಗಿ ರಚಿತವಾಗುವ 'ಕರ್ನಾಟಕ ಅಂತರ್ಜಲ ಪ್ರಾಧಿಕಾರ'ವು ಸೂಕ್ತ ಕಾನೂನುಗಳನ್ನು ಜಾರಿಗೊಳಿಸಿ ಅಂತರ್ಜಲ ಅಭಿವೃದ್ಧಿ ಬಗ್ಗೆ ಇನ್ನೂ ಹೆಚ್ಚಿನ ಕ್ರಮ ಕೈಗೊಳ್ಳಬೇಕಾಗಿದೆ.

ಇ) ಬಂದಿದೆ.

ಈ) ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕಕ್ಕೆ ಕಾನೂನು ರೂಪ ನೀಡಿದ ನಂತರ ಅಂತರ್ಜಲದ ಬಗ್ಗೆ ಅತಿ ಬಳಕೆಯನ್ನು ನಿಯಂತ್ರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಭುವನೇಶ್ವರಿ ಪ್ರತಿಮೆ ಸ್ಥಾಪನೆ

354 (138) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್): ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಭುವನೇಶ್ವರಿ ಪ್ರತಿಮೆ ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರತಿಮೆಯ ಎತ್ತರ ಎಷ್ಟು ಹಾಗೂ ಇದನ್ನು ಎಲ್ಲಿ ಸ್ಥಾಪಿಸಲಾಗುವುದು;

ಇ) ಈ ಉದ್ದೇಶಿತ ಭುವನೇಶ್ವರಿ ಪ್ರತಿಮೆಯನ್ನು ಸ್ಥಾಪಿಸಲು ತಗಲುವ ಅಂದಾಜು ವೆಚ್ಚವೆಷ್ಟು?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು):

ಅ) ಹೌದು.

ಆ) ತಾಯಿ ಭುವನೇಶ್ವರಿ ಪ್ರತಿಮೆ ಎತ್ತರ ಹಾಗೂ ನಿರ್ಮಾಣದ ಜಾಗದ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) 2011–12ನೇ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ರೂ. 25.00 ಕೋಟಿಗಳನ್ನು ನೀಡುವುದಾಗಿ ಘೋಷಿಸಲಾಗಿದೆ.

ಬನ್ನೇರುಘಟ್ಟ ಜೈವಿಕ ಉದ್ಯಾನ

355 (139) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜನವರಿ 2010ರಿಂದ ಇಲ್ಲಿಯವರೆಗೆ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಸತ್ತಿರುವ ಹುಲಿ, ಸಿಂಹ, ಚಿರತೆ ಹಾಗೂ ಇತರ ಪ್ರಾಣಿಗಳೆಷ್ಟು; ಹಾಗೂ ಅದಕ್ಕೆ ಕಾರಣಗಳೇನು;

ಆ) ಈ ಉದ್ಯಾನವನದಲ್ಲಿ ಪ್ರಾಣಿಗಳು ಸಾಯುತ್ತಿರುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕಾ ಸಚಿವರು):

ಅ) 01.01.2010 ರಿಂದ 28.02.2011ರವರೆಗೆ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿನ ಪ್ರಾಣಿಗಳ ಸಾವಿನ ವಿವರ ಈ ಕೆಳಕಂಡಂತಿದೆ.

ಕ್ರ ಸಂ.	ಪ್ರಾಣಿಗಳ ವಿವರ	ಒಟ್ಟು
1	ಹುಲಿ	9
2	ಸಿಂಹ	11
3	ಚಿರತೆ	3